Nirgatika Makkala Kuteera Yojana

List of studies Sl No (46)

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಅಇ/ಪಿಡಿಎಂ/ಪ/1/Evaluation/2013-14/2014-15

ನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು, ದಿನಾಂಕ: 06.02.2017

ಮುಖ್ಯ ಮೌಲ್ಯಮಾಪನ ಅಧಿಕಾರಿಗಳು,
ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರ
ಬೆಂಗಳೂರು.

ಮಾನ್ಯರೇ,

ವಿಷಯ:- ನಿರ್ಗತಿಕ ಮಕ್ಕಳ ಕುಟೀರ ಯೋಜನೆಯ ಮೌಲ್ಯಮಾಪನ ವರದಿಗೆ ತೆಗೆದುಕೊಂಡಿರುವ ಕ್ರಮದ ಬಗ್ಗೆ

ಉಲ್ಲೇಖ:- ಮಮಇ 21 ಮಮಅ 2016, ಇವರ ಪತ್ರ ದಿ: 10.01.2017

-----

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ನಿರ್ಗತಿಕ ಮಕ್ಕಳ ಕುಟೀರ ಯೋಜನೆಯಡಿ ನೀಡಿರುವ ಮೌಲ್ಯಮಾಪನ ವರದಿಯಲ್ಲಿ ಮಾಡಿರುವ ಪ್ರಮುಖ ಶಿಫಾರಸ್ಸುಗಳನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ. ಕುಟೀರಗಳು ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು (ದೊಡ್ಡಹಾಜರ ಮತ್ತು ಗ್ರಂಥಾಲಯ, ಶೌಚಾಲಯಗಳು, ಸ್ನಾನದ ಕೊಠಡಿಗಳು, ಅಡುಗೆ ಮನೆ, ಮಲಗುವ ಕೋಣೆ, ಮಕ್ಕಳ ವೈದ್ಯಕೀಯ ಸೌಲಭ್ಯಗಳು ಇತ್ಯಾದಿ) ಹೊಂದಿರಬೇಕೆಂದು ತಿಳಿಸಲಾಗಿರುತ್ತದೆ. ಇದಕ್ಕೆ ಸಂಬಂಧಪಟ್ಟಂತೆ ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ), ಚಿತ್ರದುರ್ಗ, ತುಮಕೂರು, ರಾಮನಗರ, ಮೈಸೂರು, ಚಿಕ್ಕಮಗಳೂರು, ಮಂಗಳೂರು, ಹಾಸನ, ಕೊಡಗು, ಮಂಡ್ಯ, ಚಾಮರಾಜನಗರ, ಗದಗ, ಕಾರವಾರ, ರಾಯಚೂರು, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿರ್ಗತಿಕ ಮಕ್ಕಳ ಕುಟೀರಗಳು ಎಲ್ಲಾ ಮೂಲಭೂತ ಸೌಲಭ್ಯ ಹೊಂದಿರುವುದಾಗಿ ತಿಳಿಸಿರುತ್ತಾರೆ. ಇತರೆ ಜಿಲ್ಲೆಗಳಲ್ಲಿ ಕೆಲವು ಕುಟೀರಗಳು ಮಾತ್ರ ಸರಿಯಾದ ಮೂಲಭೂತ ಸೌಕರ್ಯ ಒದಗಿಸದೇ ಇರುವ ಕಾರಣ ಕುಟೀರಗಳು ಮುಖ್ಯಸ್ಥರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಹಾಗೂ ಈ ಬಗ್ಗೆ ಕೂಡಲೇ ಸರಿ ಪಡಿಸಿಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ ಎಂತಲೂ ಉಪ ನಿರ್ದೇಶಕರು ತಿಳಿಸಿರುತ್ತಾರೆ, ಮುಂದುವರೆದಂತೆ ಈ ಬಗ್ಗೆ ಕಾರವಾರ ಜಿಲ್ಲೆಯ 01 ಸಂಸ್ಥೆಯನ್ನು ಹಾಗೂ ಬೀದರ್ ಜಿಲ್ಲೆಯ 03 ಸಂಸ್ಥೆಗಳಾದ

1. ಅರುಣೋದಯ ವಿದ್ಯಾವರ್ಧಕ ಸಂಸ್ಥೆ, ಮಳಗಿ, ಮುಂಡಗೋಡು ತಾಲ್ಲೂಕು, ಕಾರವಾರ
2. ಸಿದ್ಧೇಶ್ವರ ಪಿಜಿಕಲ್ ಹ್ಯಾಂಡಿಕ್ಯಾಪ್ಟ್ ಪರಸನ್ಸ್ ಶಿಕ್ಷಣ ಸಂಸ್ಥೆ, ಬೀದರ್
3. ನೀಲಾಂಬಿಕ ಮಹಿಳಾ ಮಂಡಲ, ಬೀದರ್
4. ಶ್ರೀ ಕಿತ್ತೂರು ರಾಣಿ ಚೆನ್ನಮ್ಮ ಶಿಕ್ಷಣ ಸಂಸ್ಥೆ, ಬೀದರ್

ರದ್ದುಪಡಿಸಲಾಗಿದೆಂದು ತಿಳಿಸಿರುತ್ತಾರೆ. ಸದರಿ ಮಾಹಿತಿಯನ್ನು ತಮ್ಮ ಅವಗಾಹನೆಗಾಗಿ ಸಲ್ಲಿಸಲಾಗಿದೆ.

14/2
C.R
C.T.

ತಮ್ಮ ವಿಶ್ವಾಸಿ,

138
14/2/2017

ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

ಪ್ರತಿಯನ್ನು:- ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರುರವರ ಮಾಹಿತಿಗಾಗಿ ಸಲ್ಲಿಸಿದೆ.